ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ ಎಲ್ಲ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಹಾಗೂ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಯುವ ರೆಡ್‌ಕ್ರಾಸ್ ಘಟಕಗಳನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ:- ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಐಆರ್‌ಸಿಎಸ್/ಯು.ರೆ.ಕ್ರಾ/ಮನವಿ/4406/2011 ದಿನಾಂಕ:05.12.2011.

INDIAN RED CROSS SOCIETY KARNATAKA STATE BRANCH BANGALORE No. 2521 Date 23/12/11

ಪ್ರಸ್ತಾವನೆ:-

ಮೇಲೆ ಓದಲಾದ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ ಈ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಯವರು ಸರ್ಕಾರಕ್ಕೆ ಬರೆದ ಪತ್ರದಲ್ಲಿ - ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯು ಅಂತರರಾಷ್ಟ್ರೀಯ ಮಾನವೀಯ ಸೇವಾ ಸಂಸ್ಥೆಯಾಗಿದ್ದು, ಈ ಸಂಸ್ಥೆಯು ಕೇಂದ್ರೀಯ ಕಾಯ್ದೆಯಡಿಯಲ್ಲಿ ಇಂಡಿಯನ್ ರೆಡ್‌ಕ್ರಾಸ್ ಸೊಸೈಟಿ ಆಕ್ಟ್ 1921ರಡಿಯಲ್ಲಿ ಸ್ಥಾಪನೆಗೊಂಡಿದ್ದು, ಕರ್ನಾಟಕದಲ್ಲಿ ಕೂಡ 1921 ರಿಂದ ಅಸ್ತಿತ್ವದಲ್ಲಿದ್ದು, ಈ ಸಂಸ್ಥೆಯ ಅಧ್ಯಕ್ಷರು ಗೌರವಾನ್ವಿತ ರಾಷ್ಟ್ರಪತಿಗಳಾಗಿದ್ದು ರಾಜ್ಯ ಶಾಖೆಗೆ ಘನವೆತ್ತ ರಾಜ್ಯಪಾಲರು ಅಧ್ಯಕ್ಷರಾಗಿರುತ್ತಾರೆ ಎಂದು ತಿಳಿಸುತ್ತಾ, ಈ ಸಂಸ್ಥೆಯು ಯುದ್ಧ ಸಮಯದಲ್ಲಿ ಗಾಯಗೊಂಡ ಸೈನಿಕರಿಗೆ, ನೈಸರ್ಗಿಕ ವಿಪತ್ತು, ವಿಕೋಪಗಳು ಸಂಭವಿಸಿದಾಗ ಪರಿಹಾರ ಕಾರ್ಯದಲ್ಲಿ ಹಾಗೂ ಸಾರ್ವಜನಿಕರಿಗೆ ಶುಶ್ರೂಷೆ ಮಾಡುವ ಸೇವಾ ಸಂಸ್ಥೆಯಾಗಿದೆ; ಆರೋಗ್ಯದ ಬಗ್ಗೆ ಅರಿವು ಮತ್ತು ಶಿಕ್ಷಣ, ರಕ್ತನಿಧಿಗಳು, ಅಂಗವಿಕಲರಿಗೆ ಸಾಧನ ಸಲಕರಣೆಗಳ ವಿತರಣೆ, ಪ್ರಥಮ ಚಿಕಿತ್ಸೆ, ಯುದ್ಧ, ಪ್ರಕೃತಿ ವಿಕೋಪಗಳಿಂದಾಗಿ ಚದುರಿಹೋಗಿರುವ ಕುಟುಂಬಗಳ ಸದಸ್ಯರನ್ನು ಪತ್ತೆ ಮಾಡಿ ಒಂದುಗೂಡಿಸುವುದು ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದ್ದು, ಈ ಎಲ್ಲ ಮಾನವೀಯತೆಯ ಗುಣಗಳನ್ನು ಕಾಲೇಜು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಸುವ ಉದ್ದೇಶದಿಂದ ಪ್ರತಿ ಕಾಲೇಜಿನಲ್ಲಿ ಯುವ ರೆಡ್‌ಕ್ರಾಸ್ ಘಟಕವನ್ನು ಸ್ಥಾಪಿಸುವುದು ಅತ್ಯವಶ್ಯವಾಗಿರುತ್ತದೆ ಎಂದು ತಿಳಿಸುತ್ತಾ ಇದಕ್ಕೆ ಪೂರಕವಾಗಿ ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಹಾಗೂ ತಾಂತ್ರಿಕ ಶಿಕ್ಷಣ ಸಂಸ್ಥೆಗಳು (ಪಾಲಿಟೆಕ್ನಿಕ್) ಒಮ್ಮೆ ರೂ.1500/- ಪಾವತಿಸಿ, ಆಯಾ ಕಾಲೇಜಿನಲ್ಲಿ ಯುವ ರೆಡ್‌ಕ್ರಾಸ್ ಘಟಕವನ್ನು ಪ್ರಾರಂಭಿಸಲು ಹಾಗೂ ಕಾಲೇಜಿನ ಪ್ರವೇಶ ಶುಲ್ಕವನ್ನು ಪಡೆಯುವಾಗ ಪ್ರತಿಯೊಬ್ಬ ವಿದ್ಯಾರ್ಥಿಯಿಂದ ಪ್ರತಿ ವರ್ಷ ರೂ.50/-ರಂತೆ ಶುಲ್ಕವನ್ನು ಪಡೆಯಲು ಹಾಗೆ ಸಂಗ್ರಹಿಸಿದ ಶುಲ್ಕದಲ್ಲಿ ಶೇ.70ರಷ್ಟನ್ನು ಕಾಲೇಜಿನ ಯುವ ರೆಡ್‌ಕ್ರಾಸ್ ಘಟಕದಲ್ಲಿ ಉಳಿಸಿಕೊಂಡು ಅದರ ಕಾರ್ಯಕ್ರಮಗಳಿಗೆ ಬಳಸಿಕೊಳ್ಳುವುದು ಹಾಗೂ ಉಳಿದ ಶೇ.30 ಅನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇಲ್ಲಿಗೆ ಕಳುಹಿಸುವಂತೆ ಆದೇಶಿಸಿ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

..2

ಸರ್ಕಾರವು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ:ಇಡಿ 64 ವಿವಿಧ 2011 ಬೆಂಗಳೂರು, ದಿನಾಂಕ: 22.12.2011</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯ ಕೋರಿಕೆಯಂತೆ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಥಮ ದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಹಾಗೂ ತಾಂತ್ರಿಕ ಶಿಕ್ಷಣ ಸಂಸ್ಥೆಗಳು (ಪಾಲಿಟೆಕ್ನಿಕ್) ಒಂದು ಬಾರಿ ರೂ.1500/- (ರೂಪಾಯಿ ಒಂದು ಸಾವಿರದ ಐನೂರು) ಗಳನ್ನು ಭಾರತೀಯ ರೆಡ್‌ಕ್ರಾಸ್ ಸಂಸ್ಥೆಗೆ ಪಾವತಿಸಿ ತಮ್ಮ ಶಿಕ್ಷಣ ಸಂಸ್ಥೆಗಳಲ್ಲಿ ಯುವ ರೆಡ್‌ಕ್ರಾಸ್ ಘಟಕವನ್ನು ಪ್ರಾರಂಭಿಸಲು ಅಗತ್ಯ ಕ್ರಮ ವಹಿಸಲು ಹಾಗೂ ಕಾಲೇಜಿನ ಪ್ರವೇಶ ಶುಲ್ಕವನ್ನು ಪಡೆಯುವಾಗ ಪ್ರತಿಯೊಬ್ಬ ವಿದ್ಯಾರ್ಥಿಯಿಂದ ಪ್ರತಿ ವರ್ಷ ರೂ.50/- (ರೂಪಾಯಿ ಐವತ್ತು) ರಂತೆ ಶುಲ್ಕವನ್ನು ಪಡೆಯಲು ಹಾಗೂ ಸಂಗ್ರಹಿಸಲಾದ ಶುಲ್ಕದಲ್ಲಿ ಶೇ.70ರಷ್ಟನ್ನು ಕಾಲೇಜಿನ ಯುವ ರೆಡ್‌ಕ್ರಾಸ್ ಘಟಕದಲ್ಲಿ ಉಳಿಸಿಕೊಂಡು ಅದರ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಹಾಗೂ ಉಳಿದ ಶೇ.30ರಷ್ಟನ್ನು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇಲ್ಲಿಗೆ ಕಳುಹಿಸಿಕೊಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

22/12

(ಯು.ಬಿ.ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸಾಮಾನ್ಯ-2).

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, (ವಿಶ್ವವಿದ್ಯಾಲಯ) (ಕಾಲೇಜು ಶಿಕ್ಷಣ) (ತಾಂತ್ರಿಕ ಶಿಕ್ಷಣ)
4. ಎಲ್ಲ ವಿಶ್ವವಿದ್ಯಾಲಯಗಳ ಕುಲಪತಿಗಳು.
5. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-01.
6. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-01.
7. ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ, ನಂ.26, ರೆಡ್‌ಕ್ರಾಸ್ ಭವನ, ಒಂದನೇ ಮಹಡಿ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-01.
8. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.